ಕರ್ನಾಟಕ ಸರ್ಕಾರ
**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/ಶೈವಿ/04/ಸುತ್ತೋಲೆ/2019-20

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಬೆಂಗಳೂರು,ದಿನಾಂಕ:12-03-2020

# ಸುತ್ತೋಲೆ

**ವಿಷಯ:** Corona Virus ರೋಗ ನಿಮಿತ್ತ ಎಲ್ಲಾ ಕಾಲೇಜುಗಳಲ್ಲಿ ಮುಂಜಾಗೃತ ಕ್ರಮಗಳನ್ನು ಕೈಗೊಳ್ಳುವ ಬಗ್ಗೆ.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ವಿಶ್ವದಾದ್ಯಂತ ಅತ್ಯಂತ ಮಾರಕವಾಗಿ ಪರಿಣಮಿಸಿರುವ CORONA VIRUS/COVID-19 ರೋಗವು ಸಾಂಕ್ರಾಮಿಕವಾಗಿ ಹರಡುತ್ತಿದ್ದು, ಈ ಬಗ್ಗೆ ಕರ್ನಾಟಕ ಸರ್ಕಾರವು CORONA VIRUS ರೋಗವನ್ನು ಸಾಂಕ್ರಾಮಿಕ ರೋಗವೆಂದು ಘೋಷಿಸಿರುವ ಹಿನ್ನೆಲೆಯಲ್ಲಿ ಇಲಾಖಾ ವ್ಯಾಪ್ತಿಯ ಎಲ್ಲಾ ಸರ್ಕಾರಿ/ಖಾಸಗಿ ಅನುದಾನಿತ ಕಾಲೇಜುಗಳಲ್ಲಿ ಸಿಬ್ಬಂದಿ/ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸುವುದು ಅವಶ್ಯಕವಾಗಿರುತ್ತದೆ. ಈ ನಿಟ್ಟಿನಲ್ಲಿ ಕಾಲೇಜುಗಳಲ್ಲಿ ಸಭೆ/ಸಮಾರಂಭ/ಕಾರ್ಯಗಾರ/ಸಮ್ಮೇಳನ/ವಿಚಾರಸಂಕಿರಣ ಇತ್ಯಾಧಿ ಕಾರ್ಯಕ್ರಮಗಳು ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರವಾಸ ಇವುಗಳನ್ನು ಹಮ್ಮಿಕೊಳ್ಳದೇ ಇರುವಂತೆ ಸೂಚಿಸುತ್ತಾ ಸದರಿ ಕಾರ್ಯಕ್ರಮಗಳು ತುಂಬಾ ಅವಶ್ಯಕವಿದ್ದಲ್ಲಿ ಸಂಬಂಧಿಸಿದ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಆರೋಗ್ಯ ಅಧಿಕಾರಿಗಳು ಇವರಿಂದ ಅನುಮತಿಯನ್ನು ಪಡೆದು ನಡೆಸಲು ಸೂಚಿಸಿದೆ. ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಹಕಾರದೊಂದಿಗೆ **"ನಿಮ್ಮನ್ನು ಮತ್ತು ಇತರರನ್ನು ರಕ್ಷಿಸಿ"** ಎಂಬ ಕಾರ್ಯಕ್ರಮದಡಿ CORONA VIRUS/COVID-19 ಹರಡದಂತೆ ವಹಿಸಬೇಕಾಗಿರುವ ಮುಂಜಾಗ್ರತೆ ಕ್ರಮಗಳನ್ನು ಪಾಲಿಸಲು ಹಾಗೂ ಅರಿವು ಮೂಡಿಸಲು ತುರ್ತಾಗಿ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ.

12/3/2020
**ಕಾಲೇಜು ಶಿಕ್ಷಣ ನಿರ್ದೇಶಕರು**

**ಇವರಿಗೆ:**

1. ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರು- ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.

**ಪ್ರತಿಯನ್ನು:**

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಮಂಗಳೂರು, ಶಿವಮೊಗ್ಗ, ಧಾರವಾಡ, ಕಲಬುರಗಿ- ತಮ್ಮ ಕಛೇರಿಯ ವ್ಯಾಪ್ತಿಗೆ ಬರುವ ಎಲ್ಲಾ ಸರ್ಕಾರಿ/ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಕಾರ್ಯಕ್ರಮ ಅರಿವು ಮೂಡಿಸಲು ಸೂಚಿಸಲಾಗಿದೆ.
2. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು- ಇಲಾಖಾ ವೆಬ್ ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.
3. ಕಛೇರಿ ಪ್ರತಿ.